ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ನಿಪ್ಪಾಣಿ ತಾಲ್ಲೂಕಿನ ಸರ್ಕಾರಿ ಶಾಲೆಗಳ ಸ್ವಂತ ಕಟ್ಟಡದ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1492 (1776) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆ, ನಿಪ್ಪಾಣಿ ತಾಲ್ಲೂಕಿನ ಅನೇಕ ಸರ್ಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ ಇಲ್ಲದೇ ಮರಗಳ ಕೆಳಗೆ ತರಗತಿ ನಡೆಸುತ್ತಿರುವ ವಿಷಯ ಪತ್ರಿಕೆಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ಪ್ರತಿಕ್ರಿಯೆ ಏನು ;

(ಆ) ನಿಪ್ಪಾಣಿ ತಾಲ್ಲೂಕಿನಲ್ಲಿ ಎಷ್ಟು ಸರ್ಕಾರಿ ಶಾಲೆಗಳಿವೆ; ಅವುಗಳಲ್ಲಿ ಸ್ವಂತ ಕಟ್ಟಡ ಇರುವ ಶಾಲೆಗಳ ಸಂಖ್ಯೆ ಹಾಗೂ ಸ್ವಂತ ಕಟ್ಟಡ ಇಲ್ಲದಿರುವ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಶಾಲೆಗಳಿಗೆ ಸ್ವಂತ ಕಟ್ಟಡ ಸೌಲಭ್ಯ ಒದಗಿಸದೇ ಇರಲು ಕಾರಣವೇನು ;

(ಈ) ಸ್ವಂತ ಕಟ್ಟಡಗಳಿಲ್ಲದ ಶಾಲೆಗಳಿಗೆ ಕಟ್ಟಡ ನಿರ್ಮಿಸಿಕೊಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಉ) ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗುವುದು ?